ಕರ್ನಾಟಕ ಸರ್ಕಾರ
**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರವರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01**
**ದೂ.ಸಂ:22214350, ಫ್ಯಾಕ್ಸ್ :22211086, ಇ-ಮೇಲ್: cpi.edu.sgkar@mail.kar.nic.in**

ಸಂಖ್ಯೆ: ಎಂ4/ಅದಾ/ಆಸು&ಗುಕಾ/32/2016-17 (II) ದಿನಾಂಕ: 27.09.2016

## -: ಸುತ್ತೋಲೆ :-

ವಿಷಯ: ಮಧ್ಯಾಹ್ನ ಉಪಹಾರ ಯೋಜನೆಯಡಿ ಬಿಸಿಯೂಟ ಮತ್ತು ಕ್ಷೀರಭಾಗ್ಯ ಯೋಜನೆ ಕಾರ್ಯಕ್ರಮವನ್ನು ಶಾಲಾ ಹಂತದಲ್ಲಿ ಜವಾಬ್ದಾರಿಯಿಂದ ನಿರ್ವಹಿಸುವ ಬಗ್ಗೆ.

ಉಲ್ಲೇಖ:
1) ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ದಿನಾಂಕ 16.6.2016ರಂದು ನಡೆದ ಸಭೆಯ ಸಭಾ ನಡಾವಳಿ ಪತ್ರಸಂಖ್ಯೆ ಆಕುಕ 189 ಪ್ರಾ.ಕಾ.2016.
2) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾ. & ಪ್ರೌ. ಶಿಕ್ಷಣ ರವರ ಸುತ್ತೋಲೆಯ ಇದೇ ಸಮಸಂಖ್ಯೆ ದಿನಾಂಕ 8.6.2016ರರಲ್ಲಿ ಪ್ರಾಮಾಣಿಕ ಕಾರ್ಯಕಾರಿ ವಿಧಾನಗಳ ಕುರಿತು ಸೂಚನೆಗಳು.
3) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾ. & ಪ್ರೌ. ಶಿಕ್ಷಣ ರವರ ನಡಾವಳಿ ಸಂಖ್ಯೆ ಇಡಿ-25 ಎಂಎಂಎಸ್ 2016 ದಿನಾಂಕ 18.7.2016ರ ಪತ್ರ.

********

ಮೇಲ್ಕಂಡ ಉಲ್ಲೇಖ (1)ಕ್ಕೆ ಸಂಬಂಧಿಸಿದಂತೆ ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ದಿನಾಂಕ 16.6.2016ರಂದು ಆಹಾರ ಸುರಕ್ಷತೆ ಮತ್ತುಗುಣಮಟ್ಟ ಕಾಯ್ದೆ ಅಡಿ ಪ್ರಾಮಾಣಿಕ ಕಾರ್ಯಕಾರಿ ವಿಧಾನಗಳನ್ನು ರಾಜ್ಯದ ಎಲ್ಲಾ ಬಿಸಿಯೂಟ ಯೋಜನೆಯ ಅನುಷ್ಠಾನಾಧಿಕಾರಿಗಳು ಪಾಲಿಸುವಂತೆ ಸುತ್ತೋಲೆ ಹೊರಡಿಸಲು ಉಲ್ಲೇಖ (2)ರಲ್ಲಿ ಸೂಚಿಸಿದ್ದ ಹಿನ್ನೆಲೆಯಲ್ಲಿ, ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾ. & ಪ್ರೌ. ಶಿಕ್ಷಣ ರವರು ದಿನಾಂಕ 8.6.2016ರಲ್ಲಿ ಸುತ್ತೋಲೆ ಹೊರಡಿಸಿರುತ್ತಾರೆ.

ಉಲ್ಲೇಖ (3)ರಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮಧ್ಯಾಹ್ನ ಬಿಸಿಯೂಟ ಯೋಜನೆಯ ನಿಯಮಗಳು-2015ರ ಅನುಷ್ಠಾನದ ಕುರಿತಂತೆ ನಿಯಮ 7, 8 ಮತ್ತು 9ನ್ನು ಅನುಪಾಲನೆ ಮಾಡುವ ಸಂಬಂಧ ಮಾರ್ಗಸೂಚಿಯನ್ನು ಹೊರಡಿಸಿ ರಾಜ್ಯದ ಎಲ್ಲಾ ಮಧ್ಯಾಹ್ನ ಉಪಹಾರ ಯೋಜನೆಯ ಅನುಷ್ಠಾನಾಧಿಕಾರಿಗಳು ಹಾಗೂ ಶಾಲಾ ಮುಖ್ಯಶಿಕ್ಷಕರಿಗೆ ಸುರಕ್ಷತೆಯ ಬಗ್ಗೆ ಕ್ರಮ ವಹಿಸಲು ಸೂಚಿಸಲಾಗಿರುತ್ತದೆ.

ಉಲ್ಲೇಖ (1) ಮತ್ತು (2)ರ ಸುತ್ತೋಲೆಯಲ್ಲಿರುವ ನಿರ್ದೇಶನದಂತೆ ಸುರಕ್ಷತೆಯ ಕ್ರಮಗಳನ್ನು ಅನುಸರಿಸಿ ರಾಜ್ಯ ಸರ್ಕಾರವು ಬಿಸಿಯೂಟ ಮತ್ತು ಕ್ಷೀರಭಾಗ್ಯ ಯೋಜನೆಯನ್ನು ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ 1ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಶಾಲಾ ಹಂತದಲ್ಲಿಯೇ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಯಶಸ್ವಿಯಾಗಿದೆ.

- ಶಾಲಾ ಹಂತದಿಂದ ಬೇಡಿಕೆಯನ್ನು ಪಡೆದು ಉಪಯೋಗಿತಾ ಪ್ರಮಾಣ ಪತ್ರವನ್ನು ನೀಡುವ ಜವಾಬ್ದಾರಿಯನ್ನು ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನೀಡಿದ್ದು, ಈ ನಿರ್ವಹಣೆಯಲ್ಲಿ ವ್ಯತ್ಯಯವಾದಲ್ಲಿ ಸಂಬಂಧಿಸಿದವರು ಜವಾಬ್ದಾರರಾಗಿರುತ್ತಾರೆ.
- ಆಹಾರಧಾನ್ಯ/ಸಾಮಗ್ರಿಗಳ ಎತ್ತುವಳಿಯಿಂದ ಶಾಲೆಗಳಿಗೆ ಸರಬರಾಜು ಮಾಡುವ ಹಂತದ ಮೇಲ್ವಿಚಾರಣೆಯ ಜವಾಬ್ದಾರಿಯು ಜಿಲ್ಲಾ ಹಂತದಲ್ಲಿ ಶಿಕ್ಷಣಾಧಿಕಾರಿಗಳು, ಅಕ್ಷರ ದಾಸೋಹ, ಜಿಲ್ಲಾ

ಪಂಚಾಯತ್ ಮತ್ತು ತಾಲ್ಲೂಕು ಹಂತದಲ್ಲಿ ತಾಲ್ಲೂಕು ಪಂಚಾಯತ್/ಸಹಾಯಕ ನಿರ್ದೇಶಕರು, ಅಕ್ಷರ ದಾಸೋಹ ರವರದ್ದಾಗಿದ್ದು, ಈ ಸಂದರ್ಭದಲ್ಲಿ ವ್ಯತ್ಯಯಗಳುಂಟಾದಲ್ಲಿ ಸದರಿಯವರು ನೇರ ಹೊಣೆಗಾರರಾಗಿರುತ್ತಾರೆ.

- ಶಾಲಾ ಹಂತದಲ್ಲಿ ಮುಖ್ಯಶಿಕ್ಷಕರು ಅಥವಾ ಯೋಜನೆಯ ಉಸ್ತುವಾರಿ ಶಿಕ್ಷಕರಿಂದ ಬಿಸಿಯೂಟ ನಿರ್ವಹಣೆಯಲ್ಲಿ ಉದಾಹರಣೆಗೆ ಸ್ವಚ್ಛತೆ, ಸುರಕ್ಷತೆ, ಪೌಷ್ಠಿಕಾಂಶಗಳು, ಶುದ್ಧ ಕುಡಿಯುವ ನೀರು, ಆಹಾರಧಾನ್ಯಗಳ ಗುಣಮಟ್ಟ, ತೂಕದಲ್ಲಿ ವ್ಯತ್ಯಾಸ, ದಾಸ್ತಾನು ಸಂಗ್ರಹ, ಯೋಜನೆಗೆ ಸಂಬಂಧಿಸಿದ ವಹಿಗಳಲ್ಲಿನ ನಿರ್ವಹಣೆ, ಉಸ್ತುವಾರಿಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ/ಕೊರತೆ ಕಂಡುಬಂದಲ್ಲಿ ಮುಖ್ಯ ಶಿಕ್ಷಕರೇ ನೇರ ಹೊಣೆಗಾರರಾಗಿರುತ್ತಾರೆ.
- ಬಿಸಿಯೂಟ ತಯಾರಿಸುವ ವೇಳೆ ಅಡುಗೆ ಕೋಣೆ ಸ್ವಚ್ಛತೆ, ಪಾತ್ರೆ ಪರಿಕರಗಳ ಸ್ವಚ್ಛತೆ, ಆಹಾರಧಾನ್ಯಗಳ ಶುದ್ಧೀಕರಣ, ಅಡುಗೆ ತಯಾರಿಸಲು ಬಳಕೆ ಮಾಡುವ ನೀರು, ಮಕ್ಕಳಿಗೆ ಶುಚಿ-ರುಚಿಯಾದ ಪೌಷ್ಠಿಕಾಂಶಭರಿತ ಆಹಾರ ನೀಡುವುದು, ಮಕ್ಕಳಿಗೆ ಸುರಕ್ಷಿತವಾಗಿ ಊಟ ಬಡಿಸುವುದು ಇತ್ಯಾದಿಗಳ ನಿರ್ವಹಣೆಯ ಸಂದರ್ಭದಲ್ಲಿ ಅಡುಗೆ ತಯಾರಕರು ಮತ್ತು ಸಹಾಯಕರಿಂದ ಅನಾಹುತಗಳು ಸಂಭವಿಸಿದ್ದಲ್ಲಿ ಸಂಬಂಧಿಸಿದ ಅಡುಗೆ ಸಿಬ್ಬಂದಿಯವರೇ ಹೊಣೆಗಾರರಾಗುತ್ತಾರೆ. ಅಂತಹ ಸಂದರ್ಭದಲ್ಲಿ ಅಡುಗೆ ಸಿಬ್ಬಂದಿ ಆಯ್ಕೆ ಸಮಿತಿಯು ಸಂಬಂಧಿಸಿದವರ ವಿರುದ್ಧ ಕ್ರಮಕೈಗೊಂಡು ಅಡುಗೆ ಸಿಬ್ಬಂದಿಯನ್ನು ನಿಯಮಾನುಸಾರ ಬದಲಾಯಿಸುವುದು ಹಾಗೂ ಅನಾಹುತಗಳಿಗೆ ಕಾರಣರಾದವರ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ತಕ್ಷಣವೇ ಶಿಸ್ತು ಕ್ರಮ ಕೈಗೊಂಡು ರಾಜ್ಯ ಕಛೇರಿಗೆ ವರದಿ ಮಾಡುವುದು.

*ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು [ಪ್ರಾ & ಪ್ರೌ]*
*ಇವರ ಆದೇಶದ ಮೇರೆಗೆ.*

[ಸೌಜನ್ಯ]
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಪ್ರತಿಯನ್ನು:

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
2) ರಾಜ್ಯದ ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ ಇವರಿಗೆ ಸೂಕ್ತ ಕ್ರಮಕ್ಕಾಗಿ.
3) ರಾಜ್ಯದ ಎಲ್ಲಾ ಶಿಕ್ಷಣಾಧಿಕಾರಿಗಳು, ಅಕ್ಷರ ದಾಸೋಹ, ಜಿಲ್ಲಾ ಪಂಚಾಯತ್ ಕಛೇರಿ ಇವರ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
4) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾ.ಶಿ.ಇ. ರವರುಗಳಿಗೆ ಸೂಕ್ತ ಕ್ರಮಕ್ಕಾಗಿ.
5) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇ. ರವರಿಗೆ ಸೂಕ್ತ ಕ್ರಮಕ್ಕಾಗಿ.
6) ರಾಜ್ಯ ಎಲ್ಲಾ ಕಾರ್ಯ ನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ರವರಿಗೆ ಸೂಕ್ತ ಕ್ರಮಕ್ಕಾಗಿ.
7) ರಾಜ್ಯದ ಎಲ್ಲಾ ಸಹಾಯಕ ನಿರ್ದೇಶಕರು, ಅಕ್ಷರ ದಾಸೋಹ, ತಾಲ್ಲೂಕು ಪಂಚಾಯತ್ ರವರಿಗೆ ಸೂಕ್ತ ಕ್ರಮಕ್ಕಾಗಿ.
8) ಕಛೇರಿ ಪ್ರತಿ.

E:\Comp.5\2016-17\Word Files\M 4\Suthole 20.9.2016.docx